ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಜ್ಞಾನ ಸಾಗರ ಆವರಣ, ವಿನಾಯಕನಗರ, ಕಂಟೋನ್ಮೆಂಟ್, ಬಳ್ಳಾರಿ – 583 104
ಪರೀಕ್ಷಾ ವಿಭಾಗ ದೂರವಾಣಿ: 08392-241011

ಸಂಖ್ಯೆ:ವಿಶ್ರೀಕೃವಿಬ/ಪರೀಕ್ಷಾ/ಸ್ನಾತಕೋತ್ತರ-ಅಧಿಸೂಚನೆ/2017-18 /2766 ದಿನಾಂಕ: 19/12/2017

## ಪರೀಕ್ಷಾ ಅಧಿಸೂಚನೆ

**ವಿಷಯ:** ಜನವರಿ-2018ರ ತಿಂಗಳಿನಲ್ಲಿ ಜರುಗಲಿರುವ ಸ್ನಾತಕೋತ್ತರ ಪದವಿಯ **ಪಿ.ಜಿ ಡಿಪ್ಲಾಮೊ ಇನ್ ಫೈರ್ ಆಂಡ್ ಇಂಡಸ್ಟ್ರಿಯಲ್ ಸೇಫ್ಟಿ** 1ನೇ ಸೆಮಿಸ್ಟರ್ ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕ ಪಾವತಿಸುವ ಕುರಿತು.

**ಉಲ್ಲೇಖ:** ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 16.12.2017

ಜನವರಿ-2018ರ ರ ತಿಂಗಳಿನಲ್ಲಿ ಜರುಗಲಿರುವ ಸ್ನಾತಕೋತ್ತರ ಪದವಿಯ ಒಂದನೇ ಸೆಮಿಸ್ಟರ್ **ಪಿ.ಜಿ ಡಿಪ್ಲಾಮೊ ಇನ್ ಫೈರ್ ಆಂಡ್ ಇಂಡಸ್ಟ್ರಿಯಲ್ ಸೇಫ್ಟಿ** ಪರೀಕ್ಷೆಗಳಿಗೆ ಶುಲ್ಕ ಪಾವತಿಸುವ ದಿನಾಂಕಗಳು ಈ ಕೆಳಗಿನಂತಿವೆ. ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ ಅಭ್ಯರ್ಥಿಗಳು ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಮಹಾವಿದ್ಯಾಲಯ ಮೂಲಕ ಕುಲಸಚಿವರು(ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

| ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ದಿನಾಂಕಗಳು | | |
|---|---|---|
| 01 | ದಂಡ ಶುಲ್ಕವಿಲ್ಲದೆ | 19.12.2017 ರಿಂದ 26.12.2017 |
| 02 | ದಂಡ ಶುಲ್ಕ ಪ್ರತಿ ದಿನಕ್ಕೆ ರೂ 100/-ರಂತೆ | 27.12.2017 ರಿಂದ 29.12.2017 |
| 03 | ದಂಡ ಶುಲ್ಕ ಪ್ರತಿ ದಿನಕ್ಕೆ ರೂ.500/-ರಂತೆ | 30.12.2017 |

### ಪರೀಕ್ಷಾ ಶುಲ್ಕದ ವಿವರಗಳು

| ಕ್ರ.ಸಂ | ವಿವರಣೆ | ಪ್ರತಿ ಸೆಮಿಸ್ಟರ್ ರೆಗ್ಯೂಲರ್/ರಿಪಿಟರ್‌ನ ಎಲ್ಲಾ ಪರೀಕ್ಷೆಗಳಿಗೆ |
|---|---|---|
| 01 | **ಪಿ.ಜಿ ಡಿಪ್ಲಾಮೋ ಇನ್ ಫೈರ್ ಆಂಡ್ ಇಂಡಸ್ಟ್ರಿಯಲ್ ಸೇಫ್ಟಿ (P.G Diploma in Fire & Industrial Safety) (1ನೇ ಸೆಮಿಸ್ಟರ್)** | ರೂ. 715/- |
| 02 | **ಅಂಕಪಟ್ಟಿ ಶುಲ್ಕ** | ರೂ. 110/- |

### ಪ್ರಾಂಶುಪಾಲರು ಹಾಗೂ ವಿದ್ಯಾರ್ಥಿಗಳಿಗೆ ಸೂಚನೆ:

1. ವಿಧ್ಯಾರ್ಥಿಗಳು ಆನ್‌ಲೈನ್ (online) ಮುಖಾಂತರ ಅರ್ಜಿ ಸಲ್ಲಿಸಲು student.logisys.net.in/vskub ನಲ್ಲಿ ಲಾಗಿನ್ ಆಗಿ ನೊಂದಣೆ ಸಂಖ್ಯೆ ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿದ ನಂತರ ಶುಲ್ಕದ ವಿವರಗಳುಳ್ಳ ಅರ್ಜಿ ಮುದ್ರಿಸಿ ಅಂಚೆ ಕಛೇರಿಯಲ್ಲಿ ಶುಲ್ಕ ಭರಿಸಿದ ನಂತರ ಪ್ರತಿಯನ್ನು ತಕ್ಷಣ ವಿಧ್ಯಾರ್ಥಿಗಳು ತಮ್ಮ ಕಾಲೇಜಿಗೆ ಸಲ್ಲಿಸಬೇಕು.
2. ನಿಗಧಿತ ಶುಲ್ಕವನ್ನು (ಮುದ್ರಿತ ಚಲನ್ ನಲ್ಲಿರುವಂತೆ) ಆನ್‌ಲೈನ್ ಚಲನ್‌ನೊಂದಿಗೆ ಯಾವುದೇ ಅಂಚೆ ಕಛೇರಿಯಲ್ಲಿ ನೇರವಾಗಿ ಪಾವತಿಸುವುದು.

3. SC/ST ಹಾಗೂ OBC ವಿದ್ಯಾರ್ಥಿಗಳು (ಸರ್ಕಾರಿ ಆದೇಶಗಳನ್ವಯ ವಾರ್ಷಿಕ ಆದಾಯದ ಮಿತಿಯೊಳಗೆ ಬರುವ ವಿದ್ಯಾರ್ಥಿಗಳು) ಪ್ರವರ್ಗ-01, 2ಎ, 2ಬಿ, 3ಎ, 3ಬಿ ವಿದ್ಯಾರ್ಥಿಗಳು ವಿನಾಯಿತಿ ಶುಲ್ಕವನ್ನು ಹಾಗೂ ಇತರೆ ವಿದ್ಯಾರ್ಥಿಗಳು

4. ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಈ ಬಗ್ಗೆ ಎಲ್ಲಾ ಸಂಬಂಧಪಟ್ಟ ಕಾಲೇಜಿನವರು SC/ST ಹಾಗೂ OBC ವಿದ್ಯಾರ್ಥಿಗಳ ಆದಾಯದ ವಿನಾಯಿತಿಯನ್ನು ಪರಿಗಣಿಸುವ ಮುನ್ನ ಆದಾಯ ಮಿತಿಗೆ ಸಂಬಂಧಪಟ್ಟ ಎಲ್ಲಾ ದಾಖಲಾತಿಗಳನ್ನು ಸೂಕ್ತವಾಗಿ ಪರಿಶೀಲಿಸಿ ಆದಾಯ ಮಿತಿಗೆ ಒಳಪಡುವ ವಿದ್ಯಾರ್ಥಿಗಳಿಗೆ ಮಾತ್ರ ವಿನಾಯಿತಿ ಶುಲ್ಕದ ಚಲನ್ ನ್ನು ಪರಿಗಣಿಸತಕ್ಕದ್ದು. ಆದಾಯ ಮಿತಿ ನಿಗಧಿತ ಮೊತ್ತಕ್ಕಿಂತ ಹೆಚ್ಚಿಗೆ ಇದ್ದ ಪಕ್ಷದಲ್ಲಿ, ಅಂತಹ ಚಲನ್‌ಗಳನ್ನು ಪರಿಗಣಿಸಕೂಡದೆಂದು ಈ ಮೂಲಕ ತಿಳಿಸಲಾಗಿದೆ.

5. SC/ST ಹಾಗೂ ಇನ್ನುಳಿದ OBC/LIG ವಿದ್ಯಾರ್ಥಿಗಳು (ಸರ್ಕಾರಿ ಆದೇಶಗಳ್ವಯ ವಾರ್ಷಿಕ ಆದಾಯದ ಮಿತಿಯೊಳಗೆ ಬರುವ ವಿದ್ಯಾರ್ಥಿಗಳು) ರೆಗ್ಯೂಲರ್ (Freshers) ವಿದಾರ್ಥಿಗಳು ಅಂಕಪಟ್ಟಿ ಶುಲ್ಕ ರೂ.110/- ನ್ನು ಮಾತ್ರ ಪಾವತಿಸಬೇಕು. ಆದರೆ ಸದರಿ ವರ್ಗದ ಪುನರಾವರ್ತಿತ (Repeater) ವಿದ್ಯಾಥಿಗಳಿಗೆ ಶುಲ್ಕ ವಿನಾಯಿತಿ ಇರುವುದಿಲ್ಲ ಅವರು ಪೂರ್ಣ ಪರೀಕ್ಷಾ ಶುಲ್ಕವನ್ನು ಭರಿಸಬೇಕು.

6. ಸರ್ಕಾರ ನಿಗಧಿಪಡಿಸಿದ ಆದಾಯದ ಮಿತಿಯೊಳಗಿರುವ ಬರುವ SC/ST ಹಾಗೂ ಇನ್ನುಳಿದ OBC/LIG ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಸರ್ಕಾರದ ಮಂಜೂರಾತಿ ಪಡೆದ ನಂತರ ಆಯಾ ಕಾಲೇಜಿನ ಪ್ರಾಂಶುಪಾಲರು/ವಿಭಾಗದ ಮುಖ್ಯಸ್ಥರು ವಿಶ್ವವಿದ್ಯಾಲಯಕ್ಕೆ ಸಲ್ಲಿಸತಕ್ಕದ್ದು.

7. ಆಂತರಿಕ ಅಂಕಗಳನ್ನು ಆನ್‌ಲೈನ್ ಮುಖಾಂತರ ದಿನಾಂಕ: 28.12.2017ರ ಒಳಗಾಗಿ ಸಲ್ಲಿಸತಕ್ಕದ್ದು. ನಂತರ ಬಂದ ಆಂತರಿಕ ಅಂಕಪಟ್ಟಿಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲ.

8. ಯಾವುದೇ ಅಭ್ಯರ್ಥಿಯು ತಮ್ಮ ನೊಂದಣಿ ಸಂಖ್ಯೆ ಮತ್ತು ವಿಷಯಗಳ ಆಯ್ಕೆಗಳನ್ನು ಸರಿಯಾಗಿ ನಮೂದಿಸದಿದ್ದಲ್ಲಿ ಅಥವಾ ಬೇರೆ ನೊಂದಣಿ ಸಂಖ್ಯೆ, ಸಂಬಂಧವಲ್ಲದ ವಿಷಯಗಳನ್ನು ನಮೂದಿಸಿದರೆ ಅದಕ್ಕೆ ಅಭ್ಯರ್ಥಿಯೇ ಹೊಣೆ. ಅಂತಹ ಪ್ರಕರಣಗಳನ್ನು ವಿಶ್ವವಿದ್ಯಾಲಯವು ಸರಿಪಡಿಸಲಾಗುವುದಿಲ್ಲ.

9. <u>ಪರೀಕ್ಷಾ ಶುಲ್ಕವನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕಗಳನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ ಮತ್ತು ಕೊನೆಯ ದಿನಾಂಕದ ನಂತರ ಬಂದಿರುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.</u>

19/12/2

ಕುಲಸಚಿವರು(ಮೌಲ್ಯಮಾಪನ)
REGISTRAR (EVAL)
Vijayanagara Sri Krishnadevaraya University,
Jnana Sagar Campus, Vinayakanagar,
Cantonment, BALLARI-583 104.

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
3. ಹಣಕಾಸು ಅಧಿಕಾರಿಗಳು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
4. ಪ್ರಾಂಶುಪಾಲರು, ಪಿ.ಜಿ ಡಿಪ್ಲಾಮೋ ಇನ್ ಫೈರ್ ಆಂಡ್ ಇಂಡಸ್ಟ್ರೀಯಲ್ ಸೇಫ್ಟಿ ವಿಭಾಗ, ಎನ್ ಬಿ ಎಂ.ಎಸ್.ಡಬ್ಲ್ಯೂ ಕಾಲೇಜ್, ಕೊಟ್ಟೂರು.
5. ಮೆ. ಲಾಜಿಸಿಸ್, ಬೆಂಗಳೂರು, ಶಾಖೆ: ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ ರವರಿಗೆ ಮಾಹಿತಿಗಾಗಿ.
6. ಕಛೇರಿ ಪ್ರತಿ.